**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಬಿ. ಕೆ. ಹರಿಪ್ರಸಾದ್ ರವರು ನಿಯಮ 72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಮಾನ್ಯ ಮುಖ್ಯಮಂತ್ರಿಯವರ ಉತ್ತರ.**

**ವಿಷಯ:** ಕರ್ನಾಟಕ ಪಂಚಾಯತ್ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ ರಚನೆಯಾದ ಮೇಲೆ ಕಾಯ್ದೆಯಲ್ಲಿರುವ ಅನೇಕ ಅಂಶಗಳು ಇನ್ನೂ ಜಾರಿಯಾಗದೇ ಉಳಿದಿದ್ದು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರ ಅನ್ವಯ ತುರ್ತಾಗಿ ಅನುಷ್ಠಾನಗೊಳಿಸುವ ಕುರಿತು.

****

**ಉತ್ತರ:** ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ದಿನಾಂಕ:10-05-1993 ರಿಂದ ಜಾರಿಗೆ ಬಂದಿರುತ್ತದೆ. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ನ್ನು ದಿನಾಂಕ:25-02-2016 ರಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ಎಂದು ಮರು ಪದನಾಮಿಕರಿಸಲಾಗಿದೆ. ಕರ್ನಾಟಕ ರಾಜ್ಯದಲ್ಲಿ 3 ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿರುತ್ತವೆ. ಅವುಗಳೆಂದರೆ; 1) ಗ್ರಾಮ ಪಂಚಾಯತಿ, 2) ತಾಲ್ಲೂಕು ಪಂಚಾಯತಿ ಮತ್ತು 3) ಜಿಲ್ಲಾ ಪಂಚಾಯತಿ.

ರಾಜ್ಯದ ಗ್ರಾಮೀಣ ಪ್ರದೇಶದ ಆಡಳಿತದಲ್ಲಿ ಪ್ರಜಾಪ್ರಭುತ್ವದ ವಿಕೇಂದ್ರಿಕರಣವನ್ನು ಸಾಧಿಸಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಉಪಬಂಧಗಳನ್ನು ಅನುಷ್ಠಾನಗೊಳಿಸುವುದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಮುಖ ಜವಾಬ್ದಾರಿಗಳಲ್ಲಿ ಒಂದಾಗಿದೆ. ಸ್ಥಳೀಯ ಸ್ವಾಯತ್ತತೆಯ ಸ್ಪಂದನಶೀಲ ಸಂಸ್ಥೆಗಳಾಗಿ ರಾಜ್ಯದಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳು ಕಾರ್ಯನಿರ್ವಹಿಸುವುದನ್ನು ಖಾತ್ರಿಪಡಿಸುವುದಕ್ಕಾಗಿ ಸರ್ಕಾರವು ಪಂಚಾಯತ್ ರಾಜ್ ಸಂಸ್ಥೆಗಳ ಸ್ಥಾಪನೆಯ ಕಾರ್ಯವಿಧಾನ ಮತ್ತು ಕರ್ತವ್ಯ ನಿರ್ವಹಣೆಯ ಮೇಲ್ವಿಚಾರಣೆಯನ್ನು ಮಾಡುತ್ತಿದೆ. ವಿಕೇಂದ್ರಿಕೃತ ಸಂಸ್ಥೆಗಳಿಗೆ ಹೆಚ್ಚಿನ ಅಧಿಕಾರ, ಅನುದಾನ ಮತ್ತು ಅಧಿಕಾರಗಳನ್ನು ವರ್ಗಾಯಿಸುವುದರ ಮೂಲಕ ಯೋಜನೆ/ಕಾರ್ಯಕ್ರಮಗಳನ್ನು ರೂಪಿಸುವ ಮತ್ತು ಅನುಷ್ಠಾನಗೊಳಿಸುವ ಜವಾಬ್ದಾರಿಗಳನ್ನು ಜನರೇ ನಿರ್ವಹಿಸುವ ಕ್ರಮ ಕೈಗೊಳ್ಳಲಾಗಿದೆ. ಇದರಿಂದ ಗ್ರಾಮಸ್ಥರು ತಮ್ಮ ಅಭಿವೃದ್ಧಿಯನ್ನು ತಾವೇ ಮಾಡಿಕೊಳ್ಳಲು ಮತ್ತು ತಮ್ಮ ಗ್ರಾಮದ ಪ್ರಗತಿಯ ಬಗ್ಗೆ ತಾವೇ ನಿರ್ಧಾರ ತೆಗೆದುಕೊಳ್ಳಲು ಸಾಧ್ಯವಾಗುತ್ತದೆ.

ಸದರಿ ಅಧಿನಿಯಮವು 19 ಅಧ್ಯಾಯಗಳು, 321 ಪ್ರಕರಣಗಳು ಮತ್ತು 4 ಅನುಸೂಚಿಗಳನ್ನು ಹೊಂದಿರುತ್ತದೆ. ಅನುಸೂಚಿ-I ರಲ್ಲಿ ಗ್ರಾಮ ಪಂಚಾಯತಿಯ ಪ್ರಕಾರ್ಯಗಳು, ಅನುಸೂಚಿ-II ರಲ್ಲಿ ತಾಲ್ಲೂಕು ಪಂಚಾಯತಿಯ ಪ್ರಕಾರ್ಯಗಳು, ಅನುಸೂಚಿ-III ರಲ್ಲಿ ಜಿಲ್ಲಾ ಪಂಚಾಯತಿಯ ಪ್ರಕಾರ್ಯಗಳು ಮತ್ತು ಅನುಸೂಚಿ-IV ರಲ್ಲಿ ಗ್ರಾಮ ಪಂಚಾಯತಿಗಳು ಭೂಮಿ ಮತ್ತು ಕಟ್ಟಡಗಳ ಮೇಲೆ ತೆರಿಗೆ ವಿಧಿಸಲು ಮತ್ತು ಇತರ ಬಾಬ್ತುಗಳ ಮೇಲೆ ಶುಲ್ಕಗಳನ್ನು ವಿಧಿಸಲು ಅವಕಾಶ ಕಲ್ಪಿಸಲಾಗಿದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣಗಳಿಗೆ ಕಾಲಕಾಲಕ್ಕೆ ಅವಶ್ಯಕತೆಗನುಗುಣವಾಗಿ ಸಮಗ್ರವಾಗಿ ತಿದ್ದುಪಡಿ ತರಲಾಗುತ್ತಿದೆ. ಸದರಿ ಅಧಿನಿಯಮದ ಪ್ರಕರಣಗಳಿಗೆ ಸಂಬಂಧಿಸಿದಂತೆ ನಿಯಮಗಳು/ಉಪವಿಧಿಗಳನ್ನು ರೂಪಿಸಲಾಗಿದೆ. ನಿಯಮಗಳು/ಉಪವಿಧಿಗಳನ್ನು 3 ಹಂತದ ಪಂಚಾಯತ್ ರಾಜ್ ಸಂಸ್ಥೆಗಳು ಅಳವಡಿಸಿಕೊಂಡು ನಿಯಮಾನುಸಾರ ಕಾರ್ಯನಿರ್ವಹಿಸಬಹುದಾಗಿದೆ.

143-6
2072-186

ತಳ ಹಂತದಲ್ಲಿ ಸ್ವಯಂ ಆಡಳಿತ ಘಟಕಗಳಾಗಿ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಪಂಚಾಯತಿಗಳು ಗ್ರಾಮೀಣಾಭಿವೃದ್ಧಿ ಯೋಜನೆಗಳ ಅನುಷ್ಠಾನದಲ್ಲಿ ಜನರ ಭಾಗವಹಿಸುವಿಕೆಯನ್ನು ಖಾತರಿಪಡಿಸಲು ಜನ ವಸತಿ, ವಾರ್ಡ ಸಭೆ ಮತ್ತು ಗ್ರಾಮ ಸಭೆಗಳಿಗೆ ಹೆಚ್ಚಿನ ಅಧಿಕಾರ ನೀಡಲಾಗಿದೆ. ಹಾಗೆಯೇ ಪ್ರಕರಣ 61ಎ ರಡಿ ಗ್ರಾಮ ಪಂಚಾಯತ ಸಮಿತಿಗಳ ಅಡಿಯಲ್ಲಿ ಸಮುದಾಯದ ಪ್ರತಿನಿಧಿಗಳ ಪಾಲ್ಗೊಳ್ಳುವಿಕೆಯ ಮೂಲಕ ಕಾರ್ಯನಿರ್ವಹಿಸಲು ವಿಷಯವಾರು ಉಪ ಸಮಿತಿಗಳನ್ನು ರಚಿಸಲು ಅವಕಾಶ ಕಲ್ಪಿಸಲಾಗಿದೆ. ರಚಿಸಲಾಗಿರುವ ಉಪ ಸಮಿತಿಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಅನುವಾಗುವಂತೆ ಸಮಿತಿಗಳ ರಚನೆ, ಕಾರ್ಯಕಲಾಪಗಳನ್ನು ನಡೆಸುವ ವಿಧಾನ ಹಾಗೂ ಜವಾಬ್ದಾರಿಗಳ ಬಗ್ಗೆ ವಿಸ್ತೃತವಾಗಿ ನಿಯಮಗಳು/ ಉಪವಿಧಿಗಳನ್ನು ರಚಿಸಲಾಗಿದೆ.

ಗ್ರಾಮ ಪಂಚಾಯತಿಯ ಗ್ರಾಮಗಳ ವ್ಯಾಪ್ತಿಯಲ್ಲಿನ ಭೂಮಿ ಮತ್ತು ಕಟ್ಟಡಗಳಿಗೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 199 ರಂತೆ ಪಂಚಾಯತಿ ಪ್ರದೇಶದ ಪರಿಮಿತಿಗಳೊಳಗಿರುವ, ಕೃಷಿ ತೆರಿಗೆ ನಿರ್ಧರಣೆಗೆ ಒಳಪಟ್ಟಿರದ ಕಟ್ಟಡಗಳು ಮತ್ತು ಭೂಮಿಗಳ ಮೇಲೆ ಸ್ವತ್ತಿನ ಬಂಡವಾಳ ಮೌಲ್ಯದ ಆಧಾರದಲ್ಲಿ ಅನುಸೂಚಿ-IV ರಲ್ಲಿ ನಿರ್ದಿಷ್ಟಪಡಿಸಿರುವಂತೆ ಹಾಗೂ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ತೆರಿಗೆ, ದರ ಮತ್ತು ಫೀಜುಗಳು) ನಿಯಮಗಳು, 2021 ರಂತೆ ತೆರಿಗೆಗಳನ್ನು ಅಥವಾ ಫೀಜುಗಳನ್ನು ವಿಧಿಸಬಹುದಾಗಿದೆ.

ಸದರಿ ಅಧಿನಿಯಮದ ಪ್ರಕರಣ 232-ಎ ರಂತೆ ರಾಜ್ಯದಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳು ಸುಗಮವಾಗಿ ಕಾರ್ಯನಿರ್ವಹಿಸುವುದಕ್ಕೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಪ್ರತ್ಯೇಕವಾಗಿ ಪಂಚಾಯತ್ ರಾಜ್ ಸೇವೆಗಳಿಗೆಂದೆ ಸರ್ಕಾರವು ಪಂಚಾಯತ್ ರಾಜ್ ಆಯುಕ್ತಾಲಯವನ್ನು ಸ್ಥಾಪಿಸಲಾಗಿದೆ.

ಸದರಿ ಅಧಿನಿಯಮದ ಪ್ರಕರಣ 296-ಎ ರಂತೆ ಪ್ರಾಯೋಗಿಕವಾಗಿ ಬೆಂಗಳೂರು, ಚಿಕ್ಕಮಗಳೂರು, ಬೆಳಗಾವಿ ಮತ್ತು ಕಲಬುರಗಿ ಜಿಲ್ಲೆಗಳಲ್ಲಿ ಸಾರ್ವಜನಿಕ ಕುಂದುಕೊರತೆ ನಿವಾರಣಾ ಪ್ರಾಧಿಕಾರಿಯನ್ನು ನೇಮಿಸಲಾಗಿದ್ದು, ಆ ವ್ಯಾಪ್ತಿಗೆ ಕಂದಾಯ ವಿಭಾಗದ ಇನ್ನುಳಿದ ಜಿಲ್ಲೆಗಳನ್ನು ಸೇರ್ಪಡೆ ಮಾಡಲಾಗಿದೆ.

ಸದರಿ ಅಧಿನಿಯಮದ ಉಪಬಂಧಗಳನ್ನು ಅನುಷ್ಠಾನಗೊಳಿಸುವ ಬಗ್ಗೆ ಆಗಿಂದಾಗ್ಗೆ ಸುತ್ತೋಲೆಗಳ ಮೂಲಕ 3 ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ನಿರ್ದೇಶನ ನೀಡಲಾಗುತ್ತದೆ.

ಸಂಖ್ಯೆ: ಗ್ರಾಅಪ 416 ಗ್ರಾಪಂಅ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ